## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: **2015-16ನೇ** ಸಾಲಿನಲ್ಲಿ **2014-15ನೇ** ಸಾಲಿಗೆ ಸಂಬಂಧಿಸಿದಂತೆ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯಡಿ ನಿರ್ಮಿಸಲಾದ ಅನಿಲ ಸ್ಥಾವರಗಳಿಗೆ ಬಾಕಿ ಇರುವ ಕೇಂದ್ರ ಸಹಾಯಧನ ಬಿಡುಗಡೆ ಕುರಿತು

ಉಲ್ಲೇಖ: ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಶಿವಮೊಗ್ಗ ರವರ ಪತ್ರ ಸಂಖ್ಯೆ: ಜಿಪಂಶಿ/ಅಭಿ(7) ರಾಜೈಅಯೋ/ಭೌ.ಗು/2014-15 ದಿನಾಂಕ 04.01.2016

## ಪ್ರಸ್ತಾವನೆ :

ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, **2015-16ನೇ** ಸಾಲಿನ ರಾಜ್ಯ ಆಯವ್ಯಯದಡಿ **ರೂ.1256.00** ಲಕ್ಷಗಳನ್ನು ಕೇಂದ್ರ ಹಾಗೂ ರಾಜ್ಯ ಪಾಲಾಗಿ ಜಿಲ್ಲಾ ವಲಯದಡಿ ಹಂಚಿಕೆ ಮಾಡಿದೆ.

ಮೇಲೆ ಓದಲಾದಂತೆ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಶಿವಮೊಗ್ಗ ರವರ ಕೋರಿಕೆಯನ್ವಯ **2015-16ನೇ** ಸಾಲಿನಲ್ಲಿ **2014-15ನೇ** ಸಾಲಿಗೆ ಸಂಬಂಧಿಸಿದಂತೆ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯಡಿ ನಿರ್ಮಿಸಲಾದ ಅನಿಲ ಸ್ಥಾವರಗಳಿಗೆ ಬಾಕಿ ಇರುವ ಅನುದಾನದ ಪೈಕಿ ಲಭ್ಯವಿರುವ ಕೇಂದ್ರ ಸಹಾಯಧನ **ರೂ.29.89ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2810-60-196-6-01(ಯೋಜನೆ)ರಡಿ 2015-16ನೇ** ಸಾಲಿನಲ್ಲಿನ ಜಿಲ್ಲಾ ವಲಯದಡಿ ಹಂಚಿಕೆ ಮಾಡಲಾದ ಅನುದಾನದಲ್ಲಿ ನವೀಕರಿಸಿ ಬಿಡುಗಡೆ ಮಾಡಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

### ಸರ್ಕಾರಿ ಆದೇಶ ಸಂಖ್ಯೆ: ಗ್ರಾಅಪ/85/ಜೈಅಯೋ/2015, ಬೆಂಗಳೂರು, ದಿನಾಂಕ 22.01.2016

ಪ್ರಸ್ತಾವನೆಯಲ್ಲಿ ವಿವರಿಸಲಾದಂತೆ, **2015-16ನೇ** ಸಾಲಿನಲ್ಲಿ **2014-15ನೇ** ಸಾಲಿಗೆ ಸಂಬಂಧಿಸಿದಂತೆ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯಡಿ ನಿರ್ಮಿಸಲಾದ ಅನಿಲ ಸ್ಥಾವರಗಳಿಗೆ ಬಿಡುಗಡೆಗೆ ಬಾಕಿ ಇರುವ ಅನುದಾನದ ಪೈಕಿ ಲಭ್ಯವಿರುವ ಕೇಂದ್ರ ಸಹಾಯಧನ **ರೂ.29.89ಲಕ್ಷ(ಇಪ್ಪತ್ತೊಂಬತ್ತು ಲಕ್ಷದ ಎಂಬತ್ತೊಂಬತ್ತು ಲಕ್ಷ ರೂಪಾಯಿಗಳು ಮಾತ್ರ)**ಗಳನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಶಿವಮೊಗ್ಗ ರವರಿಗೆ **2015-16ನೇ** ಸಾಲಿನಲ್ಲಿನ ಜಿಲ್ಲಾ ವಲಯದಡಿ ಹಂಚಿಕೆ ಮಾಡಲಾದ ಅನುದಾನದಲ್ಲಿ ನವೀಕರಿಸಿ ಬಿಡುಗಡೆ ಮಾಡಿ ಆದೇಶಿಸಿದೆ.

ಹಾಲಿ ಬಿಡುಗಡೆ ಮಾಡುತ್ತಿರುವ ಅನುದಾನವು ಮಹಾಲೇಖಪಾಲರ ಲೆಕ್ಕ ತಪಾಸಣೆಗೊಳಪಟ್ಟಿದ್ದು, ಕಾರ್ಯಕ್ರಮದ ಮಾರ್ಗಸೂಚಿಗಳನ್ವಯ ಉದ್ದೇಶಿತ ಯೋಜನೆಗಳಿಗಾಗಿ ಮಾತ್ರ ವಿನಿಯೋಗಿಸತಕ್ಕದ್ದು. ಯಾವುದೇ ಕಾರಣಕ್ಕೂ ಮಾರ್ಗಪಲ್ಲಟ ಮಾಡಬಾರದು, ವ್ಯಪಗತ ಮಾಡಬಾರದು ಹಾಗೂ **"ಗಾಂಧಿ ಸಾಕ್ಷಿ ಕಾಯಕ"** ತತ್ರಾಂಶದಲ್ಲಿ ಕಡ್ಡಾಯವಾಗಿ ಅಳವಡಿಸಬೇಕು ಎಂಬ ಷರತ್ತಿಗೊಳಪಟ್ಟು ಈ ಅನುದಾನ ಬಿಡುಗಡೆ ಮಾಡಿದೆ.

ಸದರಿ ಅನುದಾನವನ್ನು ಲೆಕ್ಕ ಶೀರ್ಷಿಕೆ **2810-60-196-6-01(ಯೋಜನೆ)**ರಡಿ ವೆಚ್ಚ ಭರಿಸಿ, ಈ ಅನುದಾನ ಬಳಕೆ ಮಾಡಿಕೊಂಡಿರುವ ಫಲಾನುಭವಿಗಳ ವಿವರಗಳನ್ನು ಹಾಗೂ ನಿಗದಿತ ನಮೂನೆಗಳಲ್ಲಿ ಸಿ.ಎ.ರವರಿಂದ ಆಡಿಟ್ ಮಾಡಿಸಿ ಹಣಬಳಕೆ ಪ್ರಮಾಣ ಪತ್ರವನ್ನು ನೀಡುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಸಹಮತಿ ಸಂಖ್ಯೆ : **ಆಇ 474 ವೆಚ್ಚ-6/2015** ದಿನಾಂಕ **16.12.2015** ರಲ್ಲಿ ಸಹಮತಿಯನ್ನು ಪಡೆದು ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್. ಕೃಷ್ಣಪ್ಪ)
ನಿರ್ದೇಶಕರು (ಗ್ರಾಮೂಸೌ-2) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಶಿವಮೊಗ್ಗ
3. ಉಪಕಾರ್ಯದರ್ಶಿ (ಅಭಿವೃದ್ಧಿ) / ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ಶಿವಮೊಗ್ಗ
4. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
5. ಜಿಲ್ಲಾ ಖಜಾನಾಧಿಕಾರಿ, ಶಿವಮೊಗ್ಗ
6. ಇಲಾಖಾ ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
7. ಖಜಾನೆಗಳ ನಿರ್ದೇಶಕರು, ಫೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಟವರ್, ಬೆಂಗಳೂರು.
8. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ನಂ.49, ಸೆಕೆಂಡ್ ಬ್ಲಾಕ್, ಸೆಕೆಂಡ್ ಫ್ಲೋರ್, ಖನಿಜ ಭವನ, ಸೌತ್ ಎಂಟ್ರೆನ್ಸ್, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
9. ವಿಶೇಷ ಅಧಿಕಾರಿಗಳು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಯನ್ನು :**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು (ಪಂ.ರಾ) ರವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
2. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3. ರಕ್ಷಾ ಕಡತಕ್ಕೆ / ಹೆಚ್ಚುವರಿ ಪ್ರತಿಗಳು.

ಹೊರಡಿಸಿದೆ
ದಿನಾಂಕ 22/1
ಗ್ರಾ.ಅ.ಪಂ. ಇಲಾಖೆ